ಕರ್ನಾಟಕ ವಿಶ್ವವಿದ್ಯಾಲಯ
KARNATAK UNIVERSITY

Azadi Ka Amrit Mahotsav

NAAC Accredited with "A" Grade 2022
ಸಿಂಡಿಕೇಟ ವಿಭಾಗ

ನಂ: ಕವಿವಿ/ಸಿಂಡಿಕೇಟ್/ನಡಾವಳಿಗಳು-63/2025-26/ 119 ದಿನಾಂಕ: 24-12-2025

**:: ವಿಶೇಷ ಸಿಂಡಿಕೇಟ ಸಭೆಯ ನಡಾವಳಿಗಳು ::**

ಕರ್ನಾಟಕ ವಿಶ್ವವಿದ್ಯಾಲಯದ ವಿಶೇಷ ಸಿಂಡಿಕೇಟ್ ಸಭೆಯನ್ನು **ದಿನಾಂಕ 23 ಡಿಸೆಂಬರ್, 2025 ರಂದು ಮಧ್ಯಾಹ್ನ 02:30 ಗಂಟೆಗೆ** ಸಿಂಡಿಕೇಟ ಸಭೆಯನ್ನು ಕವಿವಿ ಮುಖ್ಯ ಆಡಳಿತ ಕಟ್ಟಡದ ಸಿಂಡಿಕೇಟ್ ಸಭಾ ಭವನದಲ್ಲಿ ಜರುಗಿಸಲಾಯಿತು. ಸಭೆಯ ನಡಾವಳಿಗಳು ಈ ಕೆಳಗಿನಂತಿವೆ.

**ಸಿಂಡಿಕೇಟ ಸಭೆಗೆ ಈ ಕೆಳಗಿನಂತೆ ಸದಸ್ಯರು ಉಪಸ್ಥಿತರಿದ್ದರು:**

| | | |
|---|---|---|
| 1) | ಪ್ರೊ. ಐರನಿ ಮೊಹಮ್ಮದ್ ಖಾನ್, ಕುಲಪತಿಗಳು, ಕ.ವಿ.ವಿ. ಧಾರವಾಡ | ಅಧ್ಯಕ್ಷರು |
| 2) | ಡಾ(ಶ್ರೀಮತಿ). ಕರೀಮುನ್ನೀಸಾ ಸಯ್ಯದ್, ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಧಾರವಾಡ (ಆನ್‌ಲೈನ್ ಮೂಲಕ ಉಪಸ್ಥಿತರಿದ್ದರು) | ಸದಸ್ಯರು |
| 3) | ಡಾ. ಅರವಿಂದ ಎ. ಮೂಲಿಮನಿ, ಡೀನರು | ಸದಸ್ಯರು |
| 4) | ಶ್ರೀಮತಿ. ಅಂಜನಾ ಎಸ್. ಬಸನಗೌಡರ, ಹುಬ್ಬಳ್ಳಿ | ಸದಸ್ಯರು |
| 5) | ಶ್ರೀಮತಿ. ರತ್ನಾ ಪಾಟೀಲ, ಧಾರವಾಡ | ಸದಸ್ಯರು |
| 6) | ಡಾ. ಲಿಂಗರಾಜ ಸಿ. ಮುಳ್ಳಳ್ಳಿ, ಪ್ರಾಚಾರ್ಯರು, ಹುಬ್ಬಳ್ಳಿ | ಸದಸ್ಯರು |
| 7) | ಡಾ. ಬಿ. ಬಿ. ಹೊಳಗುಂದಿ, ಪ್ರಾಚಾರ್ಯರು, ಗದಗ | ಸದಸ್ಯರು |
| 8) | ಡಾ. ಬಿ. ಎಲ್. ಗುಂಡೂರ, ಪ್ರಾಚಾರ್ಯರು, ದಾಂಡೇಲಿ | ಸದಸ್ಯರು |
| 9) | ಶ್ರೀ. ಮಹೇಶ ವಾಯ್. ಹುಲೇನ್ನವರ, ಧಾರವಾಡ | ಸದಸ್ಯರು |
| 10) | ಶ್ರೀ. ರಾಬರ್ಟ ದದ್ದಾಪುರಿ, ಧಾರವಾಡ | ಸದಸ್ಯರು |
| 11) | ಡಾ. ಬಸವರಾಜ ಗೊರವರ, ಕುಂದಗೋಳ | ಸದಸ್ಯರು |
| 12) | ಡಾ. ಶಿವಾನಂದ ವಿ. ನಾಯಕ, ಅಂಕೋಲಾ (ಆನ್‌ಲೈನ್ ಮೂಲಕ ಉಪಸ್ಥಿತರಿದ್ದರು) | ಸದಸ್ಯರು |
| 13) | ಶ್ರೀ. ಶ್ಯಾಮ್ ಮಲ್ಲನಗೌಡರ, ಧಾರವಾಡ (ಆನ್‌ಲೈನ್ ಮೂಲಕ ಉಪಸ್ಥಿತರಿದ್ದರು) | ಸದಸ್ಯರು |
| 14) | ಡಾ. ಶೌಖತ್ ಅಜೀಮ್, ಹಿರಿಯ ಪ್ರಾಧ್ಯಾಪಕರು | ಸದಸ್ಯರು |
| 15) | ಶ್ರೀ. ಪ್ರದೀಪಕುಮಾರ, ಹಣಕಾಸು ಅಧಿಕಾರಿಗಳು, ಕ.ವಿ.ವಿ. ಧಾರವಾಡ | ವಿಶೇಷ ಆಹ್ವಾನಿತರು |
| 16) | ಡಾ. ಎನ್. ವಾಯ್. ಮಟ್ಟಿಹಾಳ, ಕುಲಸಚಿವರು(ಮೌಲ್ಯಮಾಪನ), ಕ.ವಿ.ವಿ. ಧಾರವಾಡ | ಸದಸ್ಯ ಕಾರ್ಯದರ್ಶಿಗಳು |

ನಿಯಮಾನುಸಾರ ಕನಿಷ್ಠ ಅಗತ್ಯ ಸಂಖ್ಯೆ 08ಕ್ಕಿಂತ ಹೆಚ್ಚು ಸದಸ್ಯರುಗಳು ಇರುವುದನ್ನು ಖಚಿತಪಡಿಸಿಕೊಂಡು ಅಂದರೆ 17 ಜನ ಸದಸ್ಯರುಗಳು (03 ಸದಸ್ಯರು ಆನ್‌ಲೈನ್ ಮತ್ತು 14 ಸದಸ್ಯರು ಖುದ್ದು ಹಾಜರಿರುವುದನ್ನು) ಖಚಿತಪಡಿಸಿಕೊಂಡು ಮಧ್ಯಾಹ್ನ 02:30 ಗಂಟೆಗೆ ಪ್ರಾರಂಭಿಸಲಾಯಿತು. ಮೊದಲನೆಯದಾಗಿ ಸಭೆಯ ಅಧ್ಯಕ್ಷರಾದ ಕುಲಪತಿಗಳು ಸಭೆಯಲ್ಲಿ ಹಾಜರಿದ್ದ ಎಲ್ಲ ಸದಸ್ಯರುಗಳಿಗೆ ಸ್ವಾಗತವನ್ನು ಕೋರಿ, ಸಭೆಯ ಕಲಾಪವನ್ನು ಈ ಮುಂದಿನಂತೆ ಪ್ರಾರಂಭಿಸಲಾಯಿತು.

-
-
-
-
-
-



ಕುಲಸಚಿವರು ಕುಲಪತಿಗಳು

| | | |
|---|---|---|
| 1) | ವಿಷಯ : | ಕರ್ನಾಟಕ ವಿಶ್ವವಿದ್ಯಾಲಯದ 75ನೇ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್‌ಗಾಗಿ ಸ್ವೀಕೃತಗೊಂಡ ಪ್ರಸ್ತಾವನೆಗಳನ್ನು ತಜ್ಞರ ಪರಿಶೀಲನಾ ಸಮಿತಿಗೆ ಸಲ್ಲಿಸುವ ಕುರಿತು. |
| | **ನಿರ್ಣಯ** | ಕರ್ನಾಟಕ ವಿಶ್ವವಿದ್ಯಾಲಯದ 75ನೇ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಪದವಿಗಾಗಿ ಸ್ವೀಕೃತವಾದ ಎಲ್ಲ ಅರ್ಜಿಗಳನ್ನು ಸಿಂಡಿಕೇಟ್ ಸಭೆಯಲ್ಲಿ ಕೂಲಂಕುಷವಾಗಿ ಪರಿಶೀಲಿಸಲಾಗಿ ವಿವಿಧ ಕ್ಷೇತ್ರಗಳ ಸಾಧಕರುಗಳ ಹೆಸರುಗಳನ್ನು ಪರಿಶೀಲನಾ ಸಮಿತಿಗೆ ಕಳುಹಿಸಲು ನಿರ್ಣಯಿಸಲಾಯಿತು. |
| 2) | ವಿಷಯ : | ಕರ್ನಾಟಕ ವಿಶ್ವವಿದ್ಯಾಲಯದ 75ನೇ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್‌ಗಾಗಿ ಸ್ವೀಕೃತಗೊಂಡ ಪ್ರಸ್ತಾವನೆಗಳನ್ನು ಪರಿಶೀಲಿಸಲು ತಜ್ಞರ ಪರಿಶೀಲನಾ ಸಮಿತಿಗೆ ವಿಶ್ವವಿದ್ಯಾಲಯದಿಂದ ಒಬ್ಬರನ್ನು ನಾಮನಿರ್ದೇಶನ ಮಾಡುವ ಕುರಿತು. |
| | **ನಿರ್ಣಯ** | ಕರ್ನಾಟಕ ವಿಶ್ವವಿದ್ಯಾಲಯದ 75ನೇ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್‌ಗಾಗಿ ಸ್ವೀಕೃತಗೊಂಡ ಪ್ರಸ್ತಾವನೆಗಳನ್ನು ಪರಿಶೀಲಿಸಲು ತಜ್ಞರ ಪರಿಶೀಲನಾ ಸಮಿತಿಗೆ ವಿಶ್ವವಿದ್ಯಾಲಯದ ಪ್ರತಿನಿಧಿಯಾಗಿ ಪ್ರೊ. ಎಸ್. ಆರ್. ನಿರಂಜನ, ಗುಲಬುರ್ಗಾ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳು ಹಾಗೂ ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷರು ಇವರ ಹೆಸರನ್ನು ವಿಶ್ವವಿದ್ಯಾಲಯವು ಶಿಫಾರಸ್ಸು ಮಾಡಿತು. |

ಕುಲಸಚಿವರು

ಕುಲಪತಿಗಳು